ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/ಸುತ್ತೋಲೆ/ಸ.ಪ್ರ.ದ.ಕಾ/ಆಯವ್ಯಯ/11/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: ೦೬03.2023.

ಅತೀ ತುರ್ತು

# ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 2022-23ನೇ ಸಾಲಿನಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ ಫೆಬ್ರವರಿ-2023ರ ಮಾಹೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಅವಶ್ಯಕವಾಗಿರುವ ಗೌರವಧನದ ಮಾಹಿತಿಯನ್ನು ನೀಡುವ ಕುರಿತು.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ:ಇಡಿ/18ಡಿಸಿಇ2023, ದಿನಾಂಕ:27.01.2023.
2.ಪತ್ರ ಸಂಖ್ಯೆ: ಕಾಶಿಇ/ನೇವಿ-1/ಅಉಅ/315/2022-23, ದಿನಾಂಕ:28.01.2023.

* * * * * * *

ಪ್ರಸ್ತಾವಿತ ವಿಷಯ ಮತ್ತು ಉಲ್ಲೇಖ(1) & (2)ಕ್ಕೆ ಸಂಬಂಧಿಸಿದಂತೆ, 2022-23ನೇ ಸಾಲಿನಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ನೇಮಕಗೊಂಡು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವ ಅತಿಥಿ ಉಪನ್ಯಾಸಕರುಗಳ ಮಾಹಿತಿಯನ್ನು ಇಲಾಖೆಯ ಇ.ಎಂ.ಐ.ಎಸ್ ತಂತ್ರಾಂಶದಲ್ಲಿ ಅಪ್‌ಲೋಡ್ ಮಾಡಲು ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿರುತ್ತದೆ. ಅದರಂತೆ ಫೆಬ್ರವರಿ-2023ರ ಮಾಹೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಅವಶ್ಯಕವಾಗಿರುವ ಗೌರವಧನದ ಮಾಹಿತಿ ಮತ್ತು ಡಿಎಸ್‌ಇ ಕೀ ತೊಂದರೆಯಿಂದ ಕೊರತೆಯಾಗಿರುವ ಮಾಹೆಗಳಿಗೆ ಹಾಗೂ ಖಜಾನೆ-2ರಲ್ಲಿ ಲಭ್ಯವಿರುವ ಉಳಿಕೆ ಅನುದಾನದ ಮಾಹಿತಿಯೊಂದಿಗೆ ಅವಶ್ಯಕವಾಗಿರುವ ಗೌರವಧನವನ್ನು ಪಾವತಿಸುವ ಸಂಬಂಧ ಅನುದಾನದ ಮಾಹಿತಿಯನ್ನು ಹಾಗೂ ತಮ್ಮ ಹಂತದಲ್ಲಿ ಉಳಿಕೆಯಾಗಿರುವ ಅನುದಾನಕ್ಕೆ ಸಂಬಂಧಿಸಿದಂತೆ ಬಳಸಿಕೊಳ್ಳಬೇಕಾದಲ್ಲಿ ಷರಾ ಕಾಲಂನಲ್ಲಿ ಮಾಹಿತಿಯನ್ನು ನೀಡುವುದು. ಆದ್ದರಿಂದ ಕಾಲೇಜಿನ ಪ್ರಾಂಶುಪಾಲರುಗಳು ವೈಯಕ್ತಿಕ ಗಮನಹರಿಸಿ ಸದರಿ ಸಾಲಿನಲ್ಲಿ ಅವಶ್ಯಕವಾಗಿರುವ ಗೌರವಧನಕ್ಕಾಗಿ ಅನುದಾನದ ಮಾಹಿತಿಯನ್ನು ಈ ಕೆಳಕಂಡ Excel Formatನಲ್ಲಿ ಸಾಫ್ಟ್ ಕಾಪಿಯನ್ನು ಇ-ಮೇಲ್ ವಿಳಾಸ: dcegfbudget@gmail.comಕ್ಕೆ ದಿನಾಂಕ:09.03.2023ರೊಳಗೆ ಕಳುಹಿಸಿಕೊಡಲು ಸೂಚಿಸಿದೆ. ಅನುದಾನದ ಪ್ರಸ್ತಾವನೆಯನ್ನು ಸಲ್ಲಿಸುವ ಸಂಬಂಧ ನಿಗಧಿತ ಅವಧಿಯಲ್ಲಿ ಮಾಹಿತಿಯನ್ನು ನೀಡುವುದು ಹಾಗೂ ನಿಗಧಿತ ಅವಧಿಯ ನಂತರ ಬರುವ ಪ್ರಸ್ತಾವನೆಗಳನ್ನು ಸ್ವೀಕರಿಸುವುದಿಲ್ಲ. ಒಂದು ವೇಳೆ ಪ್ರಸ್ತಾವನೆಯನ್ನು ಸಲ್ಲಿಸಲು ವಿಳಂಬವಾದಲ್ಲಿ ಪ್ರಾಂಶುಪಾಲರುಗಳೇ ನೇರ ಹೊಣೆಗಾರರಾಗಿರುತ್ತಾರೆ ಎಂಬ ಮಾಹಿತಿಯನ್ನು ಈ ಮೂಲಕ ತಿಳಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ನಮೂನೆ: ಪ್ರಾಂಶುಪಾಲರ ಹೆಸರು ಮತ್ತು ಮೊಬೈಲ್ ಸಂಖ್ಯೆ:

| ಕ್ರ.ಸಂ | ಕಾಲೇಜಿನ ಹೆಸರು | DSE KEY ತೊಂದರೆಯಿಂದ ಕೊರತೆಯಾಗಿರುವ ಅನುದಾನ | ಫೆಬ್ರವರಿ-2023ರ ಮಾಹೆಗೆ ಆವಶ್ಯಕವಾಗಿರುವ ಅನುದಾನದ ಮಾಹಿತಿ | ಒಟ್ಟು ಅನುದಾನ | ಪ್ರಾಂಶುಪಾಲರ ಹಂತದಲ್ಲಿ ಉಳಿಕೆಯಾಗಿರುವ ಒಟ್ಟು ಅನುದಾನ | ಷರಾ |
|---|---|---|---|---|---|---|
| 1 | 2 | 3 | 4 | 5 | 6 | 7 |
| | | | | | | |

ಇವರಿಗೆ:

ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

ಪ್ರತಿಯನ್ನು:

1. ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಕಲಬುರ್ಗಿ-2022-23ನೇ ಸಾಲಿಗೆ ನೇಮಕಗೊಂಡಿರುವ ಅತಿಥಿ ಉಪನ್ಯಾಸಕರುಗಳಿಗೆ ಅನುಮೋದನೆಯನ್ನು ನೀಡುವ ಸಂಬಂಧ ಕಾಲೇಜುಗಳಿಂದ ಮಾಹಿತಿಯನ್ನು ಪಡೆದು ಅನುಮೋದನೆಯನ್ನು ನೀಡುವ ಸಂಬಂಧ ಅಗತ್ಯ ಕ್ರಮಕೈಗೊಳ್ಳಲು ಸೂಚಿಸಲಾಗಿದೆ..
2. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್ ಅಳವಡಿಸಲು ಸೂಕ್ತ ಕ್ರಮಕ್ಕಾಗಿ.
3. ಕಛೇರಿ ಪ್ರತಿ.